ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2ರಿಂದ 16ರವರೆಗೆ ಎರಡೂ ಸೇರಿದಂತೆ

ಅಧ್ಯಕ್ಷರು: "ಖಂಡ 2 ರಿಂದ 16ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 16ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ.ಕೃಷ್ಣಪ್ಪ (ಸಾಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ;

"2002ರ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಈಗ ಇನ್ನೊಂದು ಬಿಲ್‌ನ್ನು ಮೂವ್ ಮಾಡುತ್ತೇನೆ. ದಯವಿಟ್ಟು ನೀವು ನಿಮ್ಮ ನಿಮ್ಮ ಸ್ಥಳಗಳಿಗೆ ಹೋಗಿ. ನಾನು ನಿಮ್ಮಲ್ಲಿ ವಿನಂತಿಸುತ್ತಿದ್ದೇನೆ, ಚರ್ಚೆಗೆ ಅವಕಾಶ ಕೊಡುತ್ತೇನೆ, ನಿಮ್ಮ ಸ್ಥಳಗಳಿಗೆ ಹೋಗಿ ಮಾತನಾಡಿ.

(ವಿರೋಧ ಪಕ್ಷದವರ ಧರಣಿ ಮುಂದುವರಿದಿತು)

ಶ್ರೀ ಮಲ್ಲಿಕಾರ್ಜುನ ಖರ್ಗೆ : ಎರಡು ಬಿಲ್ ಪಾಸ್ ಆದವಲ್ಲಾ, ಈಗ ಅಡ್ಜರ್ನ್ ಮಾಡಿಬಿಡಿ ನಾಳೆ ನೋಡೋಣ.

ಅಧ್ಯಕ್ಷರು : ಒಂದು ಬಿಲ್ ಅಷ್ಟೇ ಪಾಸ್ ಆಗಿರುವುದು. ಆಯಿತು, ಈಗ ಸದನವನ್ನು ನಾಳೆ ಬೆಳಿಗ್ಗೆ 11 ಗಂಟೆವರೆಗೆ ಮುಂದೂಡುತ್ತಿದ್ದೇನೆ.

(ಸದನವು ಸಂಜೆ 6 ಗಂಟೆ 37 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 2-8-02ರ ಶುಕ್ರವಾರದಂದು ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು)